## ಕರ್ನಾಟಕ ಸರ್ಕಾರದ ನಡವಳಿ

**ವಿಷಯ**: ನಿವೃತ್ತಿ ವೇತನದಾರರಿಗೆ ಮತ್ತು ಕುಟುಂಬ ನಿವೃತ್ತಿ ವೇತನದಾರರಿಗೆ ತುಟ್ಟಿಭತ್ಯೆ ದರಗಳ ಪರಿಷ್ಕರಣೆ.

**ಓದಲಾಗಿದೆ**: ಸರ್ಕಾರದ ಆದೇಶ ಸಂಖ್ಯೆ : ಆಇ(ವಿಶೇಷ) 15 ಸಿಪಿಪಿ 2007 ದಿನಾಂಕ: 22ನೇ ಅಕ್ಟೋಬರ್ 2007.

**ಆದೇಶ ಸಂಖ್ಯೆ: ಆಇ(ವಿಶೇಷ) 02 ಸಿಪಿಪಿ 2008**
**ಬೆಂಗಳೂರು, ದಿನಾಂಕ: 2ನೇ ಏಪ್ರಿಲ್ 2008**

ರಾಜ್ಯ ಸರ್ಕಾರದ ನಿವೃತ್ತಿ ವೇತನದಾರರು/ಕುಟುಂಬ ನಿವೃತ್ತಿ ವೇತನದಾರರಿಗೆ ಮತ್ತು ರಾಜ್ಯದ ಸಂಚಿತ ನಿಧಿಯಿಂದ ನಿವೃತ್ತಿ ವೇತನ ಮತ್ತು ಕುಟುಂಬ ನಿವೃತ್ತಿ ವೇತನವನ್ನು ಪಡೆಯುತ್ತಿರುವಂತಹ ಅನುದಾನಿತ ಶಿಕ್ಷಣ ಸಂಸ್ಥೆಗಳ ನಿವೃತ್ತಿ ವೇತನದಾರರು/ಕುಟುಂಬ ನಿವೃತ್ತಿ ವೇತನದಾರರಿಗೆ ಹಾಲಿ ಲಭ್ಯವಿರುವ ತುಟ್ಟಿಭತ್ಯೆಯ ದರವನ್ನು ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ ಶೇಕಡ 17.50 ರಿಂದ ಶೇಕಡ 22.75ಕ್ಕೆ ಹೆಚ್ಚಿಸಿ ದಿನಾಂಕ: 1ನೇ ಜನವರಿ 2008 ರಿಂದ ಜಾರಿಗೆ ಬರುವಂತೆ ಮಂಜೂರು ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ಯುಜಿಸಿ/ಎಐಸಿಟಿಇ ಮತ್ತು ಐಸಿಎಆರ್ ವೇತನ ಶ್ರೇಣಿಗಳಲ್ಲಿ ವೇತನ ಪಡೆಯುತ್ತಿದ್ದು ದಿನಾಂಕ: 1.7.2005 ರಂದು ಅಥವಾ ತದನಂತರ ನಿವೃತ್ತರಾದ ಪಿಂಚಣಿದಾರರಿಗೆ ಈ ಆದೇಶವು ಅನ್ವಯಿಸತಕ್ಕದ್ದಲ್ಲ ಇಂತಹ ಪಿಂಚಣಿದಾರರ ಕುರಿತಂತೆ ಪ್ರತ್ಯೇಕ ಆದೇಶವನ್ನು ಹೊರಡಿಸಲಾಗುವುದು.

3. ಈ ಆದೇಶದಿಂದಾಗಿ ಪಾವತಿಸಬೇಕಾದ ತುಟ್ಟಿಭತ್ಯೆಯ ಮೊತ್ತದಲ್ಲಿ ಐವತ್ತು ಪೈಸೆ ಹಾಗೂ ಅದಕ್ಕಿಂತ ಹೆಚ್ಚಿನ ಭಿನ್ನಾಂಶಗಳನ್ನು ಮುಂದಿನ ರೂಪಾಯಿಗೆ ಪೂರ್ಣಗೊಳಿಸತಕ್ಕದ್ದು ಮತ್ತು ಐವತ್ತು ಪೈಸೆಗಿಂತ ಕಡಿಮೆ ಇರುವ ಭಿನ್ನಾಂಶಗಳನ್ನು ಕಡೆಗಣಿಸತಕ್ಕದ್ದು.

ಭಾರತದ ರಾಷ್ಟ್ರಪತಿಗಳ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಯು.ಪಿ. ಪ್ರಭು)
ವಿಶೇಷಾಧಿಕಾರಿ (ವಿಶ್ರಾಂತಿ ವೇತನ)
ಆರ್ಥಿಕ ಇಲಾಖೆ.

ಇವರಿಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು

. . .2.

3. ಇಲಾಖಾ ಮುಖ್ಯಸ್ಥರು.
4. ಜಿಲ್ಲೆಗಳ ಜಿಲ್ಲಾಧಿಕಾರಿಗಳು.
5. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
6. ಪ್ರಧಾನ ಮಹಾಲೇಖಪಾಲರು (ಸಿವಿಲ್ ಮತ್ತು ವಾಣಿಜ್ಯ ಲೆಕ್ಕಪರಿಶೋಧನೆ) ಕರ್ನಾಟಕ, ಬೆಂಗಳೂರು.
7. ಮಹಾಲೇಖಪಾಲರು (ಕಂದಾಯ ಸ್ವೀಕೃತಿ ಮತ್ತು ಕಾಮಗಾರಿಗಳು ಮತ್ತು ಅರಣ್ಯ ಲೆಕ್ಕಪರಿಶೋಧನೆ) ಕರ್ನಾಟಕ, ಬೆಂಗಳೂರು.
8. ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು) ಕರ್ನಾಟಕ, ಬೆಂಗಳೂರು.
9. ರಿಜಿಸ್ಟ್ರಾರ್, ಕರ್ನಾಟಕ ಉಚ್ಛ ನ್ಯಾಯಾಲಯ, ಬೆಂಗಳೂರು.
10. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು.
12. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ಬೆಂಗಳೂರು.
14. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
15. ಕರ್ನಾಟಕ ಸರ್ಕಾರದ ಸಚಿವಾಲಯದ ಎಲ್ಲಾ ಶಾಖೆಗಳು.
16. ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ.
17. ಅಧ್ಯಕ್ಷರು, ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
18. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
19. ವಾರಪತ್ರ.
20. ಶಾಖೆಯ ರಕ್ಷಾ ಕಡತ.

[ಕ್ರಮ ಸಂಖ್ಯೆ: 9 ರಿಂದ 13 ರವರೆಗೆ ನಮೂದಿತವಾದ ಅಧಿಕಾರಿಗಳಿಗೆ ಪತ್ರದ ಮೂಲಕ].